<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ.ಸಂಕನೂರರವರು ಮಂಡಿಸಿರುವ ನಿಯಮ 330ರ ಸೂಚನೆಗೆ ಉತ್ತರ</u>

* * *

ವಿಷಯ:- ಖಾಸಗಿ ಅನುದಾನಿತ ಸಂಯುಕ್ತ ಪದವಿ ಕಾಲೇಜುಗಳಿಂದ ಬೇರ್ಪಟ್ಟಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ಅವಶ್ಯವಿರುವ ಕನಿಷ್ಠ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರದ ಅನುಮತಿಯಿಲ್ಲದಿರುವ ಕಾರಣ ಬೋಧನಾ ಕಾರ್ಯಕ್ಕೆ ತೊಂದರೆಯಾಗಿರುವುದನ್ನು ಪ್ರಸ್ತಾಪಿಸುವುದು.

<u>ಉತ್ತರ:</u>

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿದ್ದ 164 ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಪದವಿ ಪೂರ್ವ ತರಗತಿಗಳನ್ನು ಕಾಲೇಜು ಶಿಕ್ಷಣ ಇಲಾಖೆಯ ಆದೇಶದ ಸಂಖ್ಯೆ: ಕಾಶಿಇ:99:ಇತರೇ:ಆಡಳಿತ:2001 ದಿನಾಂಕ: 09-05-2001ರಲ್ಲಿ ಪದವಿಯಿಂದ ಪದವಿ ವಿಭಜಿತ ಪದವಿ ಪೂರ್ವ ಕಾಲೇಜುಗಳನ್ನಾಗಿ ವಿಭಜಿಸಿ ಆದೇಶಿಸಲಾಗಿದೆ. ಸದರಿ ಆದೇಶವು 2001-02ನೇ ಶೈಕ್ಷಣಿಕ ವರ್ಷದಿಂದ ಜಾರಿಗೆ ಬಂದಿರುತ್ತದೆ. ನಂತರದ ದಿನಗಳಲ್ಲಿ ಪದವಿ ಮತ್ತು ಪದವಿ ಪೂರ್ವ ಕಾಲೇಜುಗಳು ಒಟ್ಟಿಗೆ ನಡೆಯುತ್ತಿದ್ದ ಸಂದರ್ಭದಲ್ಲಿ ಸಹಾಯಾನುದಾನಕ್ಕೆ ಒಳಪಟ್ಟಿದ್ದು, ಬೇರ್ಪಟ್ಟ ನಂತರ ಪದವಿ ತರಗತಿಗಳಲ್ಲಿ ಮತ್ತು ಪದವಿ ಪೂರ್ವ ತರಗತಿಗಳಲ್ಲಿ ಮಂಜೂರಾಗಿರುವ ವಿಭಾಗಗಳಿಗನುಗುಣವಾಗಿ ಹುದ್ದೆಗಳನ್ನು ಹಂಚಿಕೆ ಮಾಡಲು ಕಾಲೇಜು ಶಿಕ್ಷಣ ಇಲಾಖೆಯು ಪದವಿ ಕಾಲೇಜಿನಲ್ಲಿ ತೆರವಾಗಿರುವ/ಖಾಲಿ ಇರುವ ಹುದ್ದೆಗಳಲ್ಲಿ ಪದವಿ ವಿಭಾಗಕ್ಕೆ ಅಗತ್ಯ ಇರುವ ಹುದ್ದೆಗಳನ್ನು ತನ್ನಲ್ಲಿಯೇ ಉಳಿಸಿಕೊಂಡು, ವಿಭಜನೆಗೊಂಡ 164 ಕಾಲೇಜುಗಳಲ್ಲಿ ಕೆಲವು ಹುದ್ದೆಗಳೊಂದಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಹಸ್ತಾಂತರಿಸಿರುತ್ತದೆ.

ರಾಜ್ಯದಲ್ಲಿ ಪ್ರಸ್ತುತ ಕಾಲೇಜು ಶಿಕ್ಷಣ ಇಲಾಖೆಯಿಂದ ಬೇರ್ಪಟ್ಟ 164 ಪದವಿ ಪೂರ್ವ ಕಾಲೇಜುಗಳ ಪೈಕಿ 156 ಪದವಿ ಪೂರ್ವ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ಸದರಿ ಖಾಸಗಿ ಅನುದಾನಿತ ಪದವಿ ವಿಭಜಿತ ಪದವಿ ಪೂರ್ವ ಕಾಲೇಜುಗಳಿಗೆ ಹಸ್ತಾಂತರಗೊಂಡಿರುವ 741 ಹುದ್ದೆಗಳ ಪೈಕಿ ಕಾರ್ಯಭಾರ ಹೊಂದಿರುವ 544 ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ್ದು, ಅನುಮತಿಸಿದ ಹುದ್ದೆಗಳ ಪೈಕಿ 448 ಹುದ್ದೆಗಳನ್ನು ಭರ್ತಿ ಮಾಡಿದೆ. ಉಳಿದಂತಹ ಹುದ್ದೆಗಳಿಗೆ ಸಂಬಂಧಿಸಿದಂತೆ ಆಡಳಿತ ಮಂಡಳಿ ಹುದ್ದೆ ಭರ್ತಿ ಸಂಬಂಧ ಇಲಾಖೆಗೆ ಸಲ್ಲಿಕೆಯಾಗುತ್ತಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಿ ಅರ್ಹ ಹುದ್ದೆಗಳಿಗೆ ಅನುಮೋದನೆ ನೀಡಲಾಗುತ್ತಿದೆ.

ಪದವಿ ಕಾಲೇಜಿನಿಂದ ಹಸ್ತಾಂತರವಾಗದ ಈ ಕೆಳಕಂಡ ಹುದ್ದೆಗಳನ್ನು ಪದವಿ ಪೂರ್ವ ಕಾಲೇಜುಗಳಲ್ಲಿನ ಸ್ಟಾಫಿಂಗ್ ಪ್ಯಾಟರ್ನ್‌ನಲ್ಲಿ ಗುರುತಿಸಲಾಗಿದೆ.

| ಕ್ರ.ಸಂ | ಪದನಾಮ |
|---|---|
| 01 | Principal |
| 02 | Lecturers |
| 03 | Demonstrator in Physical Education |
| 04 | SECOND DIVISION ASSISTANT |

ಖಾಸಗಿ ಅನುದಾನಿತ ಪದವಿ ವಿಭಜಿತ ಪದವಿ ಪೂರ್ವ ಕಾಲೇಜುಗಳಲ್ಲಿ 156 ಪ್ರಾಚಾರ್ಯರ ಹುದ್ದೆ, 1725 ಉಪನ್ಯಾಸಕರ ಹುದ್ದೆ, 152 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮತ್ತು 156 ದ್ವಿತೀಯ ದರ್ಜೆ ಸಹಾಯಕರ ಹುದ್ದೆ ಸೇರಿ ಒಟ್ಟು 2189 ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ ತಗಲಬಹುದಾದ ಅಂದಾಜು ವೆಚ್ಚದ ಮಾಹಿತಿಯೊಂದಿಗೆ ನಿರ್ದೇಶನಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತಾವನೆಗೆ ಸಂಬಂಧಿಸಿದಂತೆ ಅವಶ್ಯಕ ಹೆಚ್ಚುವರಿ ಮಾಹಿತಿಯನ್ನು ಇಲಾಖೆಯಿಂದ ಪಡೆಯಲು ಕ್ರಮವಹಿಸಲಾಗಿದ್ದು, ಮಾಹಿತಿಯು ಸ್ವೀಕೃತವಾದ ನಂತರ ಈ ಬಗ್ಗೆ ಪರಿಶೀಲಿಸಿ ಕ್ರಮವಹಿಸಲಾಗುವುದು.

ಈ ರೀತಿ ಕಾಲೇಜು ಶಿಕ್ಷಣ ಇಲಾಖೆಯಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಹಸ್ತಾಂತರಿಸಿದ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆಡಳಿತಾತ್ಮಕ ಅನುಮತಿಯನ್ನು ಸರಕಾರದಿಂದ ನೀಡಿದ ನಂತರ ಹುದ್ದೆಗಳ ಭರ್ತಿಗೆ ನಿರ್ದೇಶನಾಲಯದಿಂದ ನಿಯಮಾನುಸಾರ ಕ್ರಮ ವಹಿಸಲಾಗುವುದು.

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

ಸಂಖ್ಯೆ: ಇಪಿ 222 ಡಿಜಿಡಬ್ಲ್ಯೂ 2023